**ಹಾಸನ ನಗರ ಗೃಹ ನಿರ್ಮಾಣ ಸಹಕಾರ ಸಂಘ ನಿ.,**
ದೇವರಾಜ ಅರಸ್ ಮಾರ್ಕೆಟ್, ಹಾಸನ. ☐ 264825

| ವಾರ್ಷಿಕ ಬಡ್ಡಿ ದರದ ವಿವರಗಳು | ಸಾಮಾನ್ಯರಿಗೆ % | ಹಿರಿಯ ನಾಗರಿಕರಿಗೆ % |
|---|---|---|
| * 1 ವರ್ಷದಿಂದ 3 ವರ್ಷಗಳವರೆಗೆ | 10.5 | 11 |
| * 181ದಿನಗಳಿಂದ 365 ದಿನಗಳವರೆಗೆ | 8 | 8.5 |
| * 91 ದಿನಗಳಿಂದ 180 ದಿನಗಳವರೆಗೆ | 7 | 7.5 |
| * 31 ದಿನಗಳಿಂದ 90 ದಿನಗಳವರೆಗೆ | 6 | 6.5 |
| * 90 ತಿಂಗಳುಗಳಲ್ಲಿ ಠೇವಣಿ ಮೊತ್ತ ದ್ವಿಗುಣ | | |

-ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ



# ಜನತಾ ಮಾಧ್ಯಮ

ಸಂಪಾದಕ : ಆರ್.ಪಿ.ವೆಂಕಟೇಶಮೂರ್ತಿ

ವ್ಯವಸ್ಥಾಪಕ ಸಂಪಾದಕ :ಎಸ್.ಎನ್.ಮಂಜುನಾಥದತ್ತ









## ಶಶಿಕಲಾ ಪೆರೋಲ್ ಅರ್ಜಿ ತಿರಸ್ಕರಿಸಿದ ಕಾರಾಗೃಹ ಇಲಾಖೆ

ಅಕ್ರಮ ಆಸ್ತಿ ಗಳಿಕೆ ಪ್ರಕರಣದಲ್ಲಿ ಪರಪ್ಪನ ಅಗ್ರಹಾರ ಜೈಲು ಪಾಲಾಗಿರುವ ಎಐಎಡಿಎಂಕೆ ಉಚ್ಚಾಟಿತ ನಾಯಕಿ ವಿ.ಕೆ.ಶಶಿಕಲಾ ಅವರ ಪೆರೋಲ್ ಅರ್ಜಿಯನ್ನು ಕಾರಾಗೃಹ ಇಲಾಖೆ ಮಂಗಳವಾರ ತಿರಸ್ಕರಿಸಿದೆ. ಪತಿಯ ಅನಾರೋಗ್ಯದ ಕಾರಣ ನೀಡಿ 15 ದಿನಗಳ ಕಾಲ ಪೆರೋಲ್ ಮೇಲೆ ಬಿಡುಗಡೆ ಮಾಡುವಂತೆ ಕೋರಿ ಶಶಿಕಲಾ ಸಲ್ಲಿಸಿದ್ದ ಅರ್ಜಿಯನ್ನು ತಿರಸ್ಕರಿಸಲಾಗಿದ್ದು, ಅವರ ವಿರುದ್ಧ ಕ್ರಿಮಿನಲ್ ಪ್ರಕರಣಗಳು ತನಿಖಾ ಹಂತದಲ್ಲಿರುವುದರಿಂದ ಪೆರೋಲ್ ನೀಡಲು ಬರುವುದಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



## ಲಂಡನ್‌ನಲ್ಲಿ ವಿಜಯ ಮಲ್ಯ ಸೆರೆ-ಬಿಡುಗಡೆ

ಅಕ್ರಮ ಹಣ ವರ್ಗಾವಣೆ ಪ್ರಕರಣ ಸಂಬಂಧ ಉದ್ಯಮಿ ವಿಜಯ ಮಲ್ಯ ಅವರನ್ನು ಲಂಡನ್‌ನಲ್ಲಿ ಬಂಧಿಸಲಾಗಿದೆ ಎಂದು ವರದಿಯಾಗಿದೆ. ವಿಜಯ ಮಲ್ಯ ವಿರುದ್ಧ ಜಾರಿ ನಿರ್ದೇಶನಾಲಯ ಅಕ್ರಮ ಹಣ ವರ್ಗಾವಣೆ ಪ್ರಕರಣ ದಾಖಲಿಸಿತ್ತು. ಈ ಸಂಬಂಧ ವಿಜಯ ಮಲ್ಯ ಅವರನ್ನು ಬಂಧಿಸಿ ಕೋರ್ಟ್ ಮುಂದೆ ಹಾಜರುಪಡಿಸಲಾಗಿದ್ದು, ನ್ಯಾಯಾಧೀಶರು ಮಲ್ಯಗೆ ಜಾಮೀನು ನೀಡಿದ್ದಾರೆ.



## ಪಂಜಾಬ್‌ನಲ್ಲಿ ಅತ್ಯಾಚಾರಿ ರಾಮ್ ರಹೀಂ ಪುತ್ರಿ ಹನಿಪ್ರೀತ್ ಬಂಧನ

ಅತ್ಯಾಚಾರ ಪ್ರಕರಣದಲ್ಲಿ ಜೈಲು ಪಾಲಾಗಿರುವ ಡೇರಾ ಸಚ್ಚಾ ಸೌದಾ ಮುಖ್ಯಸ್ಥ ರಾಮ್ ರಹೀಂ ಸಿಂಗ್ ಆಪ್ತೆ ಹಾಗೂ ದತ್ತು ಪುತ್ರಿ ಎನ್ನಲಾಗುತ್ತಿರುವ ಹನಿಪ್ರೀತ್ ಇನ್ಸಾನ್‌ರನ್ನು ಹರಿಯಾಣ ಪೊಲೀಸರು ಮಂಗಳವಾರ ಪಂಜಾಬ್‌ನಲ್ಲಿ ಬಂಧಿಸಿದ್ದಾರೆ. ಅತ್ಯಾಚಾರಿ ಬಾಬಾ ಜೈಲು ಪಾಲಾಗುತ್ತಿದ್ದಂತೆ ತಲೆ ಮರೆಸಿಕೊಂಡಿದ್ದ ಹನಿಪ್ರೀತ್‌ಳನ್ನು ಸುಮಾರು ಒಂದು ತಿಂಗಳ ನಂತರ ಮಂಗಳವಾರ ಪಟಿಯಾಲ ರಸ್ತೆಯಲ್ಲಿ ಬಂಧಿಸಲಾಗಿದೆ.


ಜನತಾಮಾಧ್ಯಮ ಬೆಳಗಿನ ದೈನಿಕ | JANATHAMADHYAMA | KARKAN. RNI 41566. | ಸಂಪುಟ : 40 | ಸಂಚಿಕೆ :326 | ಬುಧವಾರ ಅ.4, 2017 | ದೂರವಾಣಿ : 268494 | ಪುಟ-4 | ರೂ.2-00 | NO. HSN-761/ 2015-17


# ನನ್ನ ಕನಸಿನ ಹಾಸನ : ನೀಲನಕ್ಷೆ ತಯಾರಿಗೆ ಚಾಲನೆ

**ಹಾಸನ : ರಾಜ್ಯದ ಸಮಗ್ರ ಅಭಿವೃದ್ಧಿಯ ಮುನ್ನೋಟವನ್ನು ಗುರುತಿಸಿ ಅದರ ಗುರಿ ಸಾಧನೆಗೆ ಯೋಜನೆ ರೂಪಿಸುವ ನನ್ನ ಕನಸಿನ ಹಾಸನ ಜಿಲ್ಲೆ-2025 ಜಿಲ್ಲಾ ಮಟ್ಟದ ಕಾರ್ಯಾಗಾರದ ನೀಲನಕ್ಷೆ ತಯಾರಿಗೆ ಜಿಲ್ಲೆಯಲ್ಲಿ ಮಂಗಳವಾರ ಚಾಲನೆ ದೊರಕಿತು.**

ನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಸಭಾಂಗಣದಲ್ಲಿ ನಡೆದ ನನ್ನ ಕನಸಿನ ಹಾಸನ ಜಿಲ್ಲೆ-2025 ಜಿಲ್ಲಾ ಮಟ್ಟದ ಕಾರ್ಯಾಗಾರದಲ್ಲಿ ಸುಮಾರು 13 ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಕೃಷಿ ಮತ್ತು ಅದಕ್ಕೆ ಸಂಬಂಧಪಟ್ಟ ಕ್ಷೇತ್ರಗಳು, ಮೂಲ ಸೌಕರ್ಯ, ರಸ್ತೆ, ಕುಡಿಯುವ ನೀರಿನ ಸೌಲಭ್ಯ ಮತ್ತು ನೈರ್ಮಲ್ಯೀಕರಣ , ಉದ್ಯೋಗ ಮತ್ತು ಕೌಶಲ್ಯ, ಕೈಗಾರಿಕೆ ಅಭಿವೃದ್ಧಿ , ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ, ಆರೋಗ್ಯ ಮತ್ತು ಪೋಷಣೆ, ಶಿಕ್ಷಣ, ಗ್ರಾಮೀಣಾಭಿವೃದ್ಧಿ , ನಗರಾಭಿವೃದ್ಧಿ, ಮಾಹಿತಿ ಮತ್ತು ಸಂಪರ್ಕ ತಂತ್ರಜ್ಞಾನ ಸೇವೆಗಳು, ಆಡಳಿತ, ಕಾನೂನು ಸುವ್ಯವಸ್ಥೆ ನ್ಯಾಯ ಕ್ಷೇತ್ರಗಳಲ್ಲಿನ ಸುಧಾರಣೆಗೆ ಇರುವ ಸಾಧ್ಯತೆಗಳ ಬಗ್ಗೆ ಆಗಬೇಕಾಗಿರುವ ಸುಸ್ಥಿರ ಅಭಿವೃದ್ಧಿ ಕುರಿತು ವಿವಿಧ ಕ್ಷೇತ್ರಗಳ ತಜ್ಞರು, ಆಸಕ್ತರಿಂದ ಚರ್ಚೆ ನಡೆದು ಅಭಿಪ್ರಾಯ ಸಂಗ್ರಹಿಸಲಾಯಿತು.

ಜಿಲ್ಲಾ ಉಸ್ತುವಾರಿ ಸಚಿವ ಎ.ಮಂಜು ಹಾಗೂ ಸರ್ಕಾರದ ಪ್ರಧಾನ ಕಾರ್ಯದರ್ಶಿ ಮತ್ತು ಸಾರ್ವಜನಿಕ ಉದ್ದಿಮೆಗಳ ಇಲಾಖೆ ಹಾಗೂ ವಿಷನ್-2025 ಡಾಕ್ಯುಮೆಂಟ್ ಪ್ರಾಜೆಕ್ಟ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರೇಣುಕಾ ಚಿದಂಬರಂ ಅವರು ಸಹ ಗುಂಪು ಚರ್ಚೆಯಲ್ಲಿ ಭಾಗವಹಿಸಿ ಚರ್ಚೆ, ಸಾಗಬೇಕಿರುವ ದಿಕ್ಕು-ಯೋಜನೆಗಳು, ರಾಜ್ಯ ವ್ಯಾಪ್ತಿ ಅನುಷ್ಠಾನಕ್ಕೆ ಸಾಧ್ಯವಾಗುವಂತೆ ಯೋಜನೆ ಹೇಗೆ ರೂಪಿಸಬೇಕು ಎಂಬುದರ ಬಗ್ಗೆ ಸಲಹೆಗಳನ್ನು ನೀಡಿದರು. *(-ಪುಟ 4ಕ್ಕೆ)*



ನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಸಭಾಂಗಣದಲ್ಲಿ ನಡೆದ ನನ್ನ ಕನಸಿನ ಹಾಸನ ಜಿಲ್ಲೆ-2025 ಜಿಲ್ಲಾ ಮಟ್ಟದ ಕಾರ್ಯಾಗಾರದಲ್ಲಿ ಹಲವರು ತಮ್ಮ ಅಭಿಪ್ರಾಯ ಮಂಡಿಸಿದರು.

## 13 ಕ್ಷೇತ್ರ ವ್ಯಾಪ್ತಿಯ 5 ಗುಂಪುಗಳ ರಚನೆ

ಹಾಸನ : ನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಸಭಾಂಗಣದಲ್ಲಿ ನಡೆದ ನನ್ನ ಕನಸಿನ ಹಾಸನ ಜಿಲ್ಲೆ -2025 ಜಿಲ್ಲಾ ಮಟ್ಟದ ಕಾರ್ಯಾಗಾರದಲ್ಲಿ ಸುಮಾರು 13 ಕ್ಷೇತ್ರಗಳ ವ್ಯಾಪ್ತಿಯಲ್ಲಿ ಆಗಬೇಕಾಗಿರುವ ಸುಸ್ಥಿರ ಅಭಿವೃದ್ಧಿ ಬಗ್ಗೆ ಚರ್ಚಿಸಲು ಅಧಿಕಾರಿಗಳು, ಕೃಷಿಕರು, ವಕೀಲರು ಮತ್ತು ಪ್ರಗತಿಪರ ಚಿಂತಕರು, ಸಂಘ ಸಂಸ್ಥೆಗಳ ಪ್ರತಿನಿಧಿಗಳನ್ನೊಳಗೊಂಡ 5 ಗುಂಪುಗಳನ್ನು ರಚನೆ ಮಾಡಲಾಯಿತು.

ಪ್ರತಿ ಗುಂಪಿಗೂ ಒಬ್ಬೊಬ್ಬ ಪ್ರತಿನಿಧಿಯನ್ನು ಆಯ್ಕೆ ಮಾಡಿ ಗುಂಪಿನಲ್ಲಿ ಚರ್ಚಿಸಲಾದ ವಿಚಾರಗಳನ್ನು ಅಂತಿಮವಾಗಿ ಸಭೆಯಲ್ಲಿ ಮಂಡಿಸಲು ಅವಕಾಶ ನೀಡಲಾಯಿತು

ಐದು ಗುಂಪು ಮತ್ತು ಮಂಡಿಸಿದ ವಿಷಯಗಳ ವಿವರ :

ನಗರ ಮೂಲ ಸೌಕರ್ಯ, ಸ್ಮಾರ್ಟ್ ಸಿಟಿ : ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೃಷ್ಣಕುಮಾರ್

ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ : ಆರ್.ಪಿ.ವೆಂಕಟೇಶ ಮೂರ್ತಿ

ಸಾಮಾಜಿಕ ನ್ಯಾಯ ಆರೋಗ್ಯ ಶಿಕ್ಷಣ : ರೂಪ ಹಾಸನ್,

ಕೈಗಾರಿಕಾಭಿವೃದ್ಧಿ ಸೇವೆಗಳು, ಉದ್ಯೋಗ ಮತ್ತು ಕೌಶಲ್ಯಾಭಿವೃದ್ಧಿ ಮಾಹಿತಿ ತಂತ್ರಜ್ಞಾನ : ಕೈಗಾರಿಕಾ ಸಂಘದ ಉಪಾಧ್ಯಕ್ಷ ಕಿರಣ್

ಆಡಳಿತ ಕಾನೂನು ಮತ್ತು ನ್ಯಾಯ : ವಕೀಲ ಶೇಷಾದ್ರಿ.

ಇವರೆಲ್ಲರೂ ತಮ್ಮ ಕ್ರೋಢೀಕೃತ ಅಭಿಪ್ರಾಯಗಳನ್ನು ಮಂಡಿಸಿದರು.

ಸಂವಾದದಲ್ಲಿ ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ರೇಣುಕಾ ಚಿದಂಬರಂ, ಜಿಲ್ಲಾಧಿಕಾರಿ ರೋಹಿಣಿ ಸಿಂಧೂರಿ , ಪೊಲೀಸ್ ವರಿಷ್ಠಾಧಿಕಾರಿ ರಾಹುಲ್ ಕುಮಾರ್ ಶಹಾಪುರ್‌ವಾಡ್, ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಕೆ.ಎಂ.ಜಾನಕಿ, ಅಪರ ಜಿಲ್ಲಾಧಿಕಾರಿ ಪೂರ್ಣಿಮ, ಕರ್ನಾಟಕ ಫೆಡರೇಷನ್ ವಾಣಿಜ್ಯ ಮತ್ತು ಕೈಗಾರಿಕೋದ್ಯಮ ಮಹಾ ಮಂಡಳ ಅಧ್ಯಕ್ಷ ರವಿ, ಉಪ ವಿಭಾಗಾಧಿಕಾರಿ ಡಾ.ಹೆಚ್.ಎಲ್.ನಾಗರಾಜ್, ತಹಸೀಲ್ದಾರ್ ಶಿವಶಂಕರ್ ಇನ್ನಿತರರು ಇದ್ದರು.

## ಡಿಸೆಂಬರ್ ಅಂತ್ಯದೊಳಗೆ ಸರ್ಕಾರಕ್ಕೆ ಸಲ್ಲಿಕೆ

ಹಾಸನ : ಮುಂದಿನ ಏಳು ವರ್ಷಕ್ಕೆ ಕರ್ನಾಟಕ ರಾಜ್ಯದ ಅಭಿವೃದ್ಧಿ ದೃಷ್ಟಿ ಕೋನದಲ್ಲಿ ನೀಲ ನಕ್ಷೆ ತಯಾರಿಸುವ ಸಲುವಾಗಿ ರಾಜ್ಯದ ಪ್ರತಿ ಜಿಲ್ಲೆಯಲ್ಲೂ ಕಾರ್ಯಾಗಾರ ನಡೆಸಿ ಜನರ ಅಭಿಪ್ರಾಯ, ಸಲಹೆ, ಸೂಚನೆಗಳನ್ನು ಸಂಗ್ರಹಿಸಿ



ಡಿಸೆಂಬರ್ ಅಂತ್ಯದೊಳಗಾಗಿ ಡಾಕ್ಯುಮೆಂಟ್ ತಯಾರು ಮಾಡಿ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ರೇಣುಕ ಚಿದಂಬರಂ ತಿಳಿಸಿದರು.

ವಿಷನ್-2025 ಕರ್ನಾಟಕ ಡಾಕ್ಯುಮೆಂಟ್ ಯೋಜನೆ ಅಡಿಯಲ್ಲಿ ನನ್ನ ಕನಸಿನ ಹಾಸನ ಜಿಲ್ಲೆ -2025 ಜಿಲ್ಲಾ ಮಟ್ಟದ ಕಾರ್ಯಾಗಾರವನ್ನು ಉದ್ಘಾಟಿಸಿದ ನಂತರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಡಾಕ್ಯುಮೆಂಟ್ ಪ್ರತಿಯನ್ನು ಪ್ರತಿಯೊಬ್ಬ ಜನಸಾಮಾನ್ಯನು ಕೂಡ ಓದುವಂತೆ ರಾಜ್ಯ ಸರ್ಕಾರ ಅವಕಾಶ ಮಾಡಿಕೊಡಲಿದೆ ಎಂದು ಹೇಳಿದರು.

**“ ಜಿಲ್ಲಾಧಿಕಾರಿ ಕಛೇರಿ, ನ್ಯಾಯಾಲಯ ಸಂಕೀರ್ಣ ಒಂದೇ ಕಡೆ ಇರಬೇಕು. ನ್ಯಾಯ ವಿತರಣೆಯಲ್ಲಿ ವಿಳಂಬ ಆಗುತ್ತಿರುವುದರಿಂದ ಇವೆರಡೂ ಒಂದೇ ಕಡೆ ಇರುವುದು ಸೂಕ್ತ. ಅರೆ ನ್ಯಾಯಿಕ ನ್ಯಾಯಾಧೀಕರಣಗಳನ್ನು ರದ್ದುಪಡಿಸಿ, ಸಂಬಂಧಿಸಿದ ವಿವಾದಗಳನ್ನು ಶುದ್ಧ ನ್ಯಾಯಾಂಗ ವ್ಯವಸ್ಥೆ ಒಳಗೆ ತರಬೇಕು. ಆಡಳಿತ ವ್ಯವಸ್ಥೆಯಲ್ಲಿ ಭ್ರಷ್ಟಾಚಾರ ತೊಡೆದು ಹಾಕಬೇಕು. ‘ಸಕಾಲ’ ಯೋಜನೆ ಇದ್ದರೂ ಸರ್ಕಾರಿ ಕಛೇರಿಗಳಲ್ಲಿ ಸರಿಯಾಗಿ ಕೆಲಸ ಆಗುತ್ತಿಲ್ಲ.**

***-ಶೇಷಾದ್ರಿ, ವಕೀಲ***

**“ ಕೊಳಚೆ ನೀರು ಪುನರ್ ಬಳಕೆಯಾಗಬೇಕು. ಕಸದ ನಿರ್ವಹಣೆ ಪರಿಣಾಮಕಾರಿಯಾಗಿ ಆಗಬೇಕು. ಕಸವನ್ನು ವೈಜ್ಞಾನಿಕವಾಗಿ ವಿಂಗಡಿಸಿ**



**ನಗರವನ್ನು ಕಸ ಮುಕ್ತವನ್ನಾಗಿ ಮಾಡಬೇಕು. ಒಳಚರಂಡಿ ಜಾಲ ವಿಸ್ತರಿಸಬೇಕು. ಕಸ ಮುಕ್ತ ನಗರಕ್ಕೆ ಎಲ್ಲರೂ ಕೈ ಜೋಡಿಸಬೇಕು. ಸ್ಮಾರ್ಟ್ ಸಿಟಿಗೆ ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಬೇಕು.**

***-ಕೃಷ್ಣಕುಮಾರ್, ಅಧ್ಯಕ್ಷರು, ಹುಡಾ***

**“ ಕೈಗಾರಿಕಾ ಅಭಿವೃದ್ಧಿ ಪ್ರದೇಶದ ನಿರ್ವಹಣೆ ಸ್ವಚ್ಛ ಆಗಿರಬೇಕು. ಚೆನ್ನಾಗಬೇಕು. ಆಕರ್ಷಕ, ಸುಂದರವಾಗಿರಬೇಕು. ಸಣ್ಣ ಕೈಗಾರಿಕೆಗಳಿಗೆ ಹೆಚ್ಚು ಒತ್ತು ನೀಡಬೇಕು. ಹಾಸನದಿಂದ ಪ್ರತಿ ವರ್ಷ 3000ಕ್ಕಿಂತ ಹೆಚ್ಚು ಕಂಪ್ಯೂಟರ್ ಸೈನ್ಸ್, ಐಟಿ ವಿದ್ಯಾರ್ಥಿಗಳು ಹೊರಬರುತ್ತಿದ್ದು , ಉದ್ಯೋಗಕ್ಕಾಗಿ ಹೊರಹೋಗುತ್ತಾರೆ. ಹಾಸನದಲ್ಲಿ ಮೂರು ಐ.ಟಿ. ಉದ್ಯಮಗಳ ಸ್ಥಾಪನೆಯಾಗಬೇಕು. ಟ್ರಕ್ ಟರ್ಮಿನಲ್, ಕೃಷಿ ಆಧಾರಿತ ಕೈಗಾರಿಕೆಗಳು, ವಿಮಾನ ನಿಲ್ದಾಣ ಅಗತ್ಯ.**

***-ಹೆಚ್.ಕೆ.ಕಿರಣ್, ಉದ್ಯಮಿ.***

**“ ಪ್ರತಿ ತಾಲ್ಲೂಕು ಆಸ್ಪತ್ರೆಯಲ್ಲಿ ಡಯಾಲಿಸಿಸ್ ವ್ಯವಸ್ಥೆ ಇರಬೇಕು. ಗಂಭೀರ ಕಾಯಿಲೆಗಳ ವೆಚ್ಚವನ್ನು ಸರ್ಕಾರವೇ ಭರಿಸಬೇಕು. ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ**



**ಯೋಗ ಭವನ ನಿರ್ಮಿಸಬೇಕು. ಪಥ್ಯದ ಮೂಲಕ ಆರೋಗ್ಯ ಸೇವೆ ಯೋಜನೆಗಳನ್ನು ಪ್ರಚಾರ ಮಾಡಬೇಕು. ನೂತನ ಪಥ್ಯ, ಸರ್ವ ಶಿಕ್ಷಣ ವ್ಯವಸ್ಥೆ ಆಗಬೇಕು.**

***-ರೂಪ ಹಾಸನ್, ಸಾಹಿತಿ.***

## ಹಳ್ಳಿಗಳ ಅಭಿವೃದ್ಧಿಗೆ ಗ್ರಾಮಸ್ಥರ ಸಹಕಾರ ಅಗತ್ಯ

ಗ್ರಾಮಗಳ ಅಭಿವೃದ್ಧಿ ಕಾರ್ಯದಲ್ಲಿ ಗ್ರಾಮಸ್ಥರ ಸಂಪೂರ್ಣ ಸಹಕಾರ ಇರಬೇಕು. ಪ್ರತಿಯೊಂದು ಗ್ರಾಮವು ತನ್ನ ಗ್ರಾಮಕ್ಕೆ ಅಗತ್ಯವಾದ ವಾರ್ಷಿಕ ಯೋಜನೆಯೊಂದನ್ನು ರೂಪಿಸಿಕೊಳ್ಳಬೇಕು ಎಂದು ಪ್ರಗತಿಪರ ಚಿಂತಕ ಆರ್.ಪಿ.ವೆಂಕಟೇಶಮೂರ್ತಿ ಹೇಳಿದರು.



ಪ್ರತಿಯೊಂದು ಗ್ರಾಮದಲ್ಲಿರುವ ಕೆರೆ-ಕಟ್ಟೆ , ಕಲ್ಯಾಣಿ, ತೆರೆದ ಬಾವಿಗಳ ಪುನಶ್ಚೇತನ ಆಗಬೇಕು. ಸಂಪೂರ್ಣ ಸಾಕ್ಷರತಾ ಆಂದೋಲನದ ಮಾದರಿಯಲ್ಲಿ ಜಲ ಸಾಕ್ಷರತಾ ಆಂದೋಲನವೂ ಇಡೀ ರಾಜ್ಯದಲ್ಲಿ ನಡೆಯಬೇಕು ಎಂದರು.

ಕೆರೆ ಕಟ್ಟೆಗಳಿಗೆ ಮಳೆ ನೀರು ಹರಿದು ಬರುವ ಕಾಲುವೆಗಳ ದುರಸ್ತಿ ಆಗಬೇಕು. ಖಾಸಗಿ ಕೊಳವೆ ಬಾವಿಗಳಿಗೆ ಜಲ ಮರುಪೂರಣದ ವ್ಯವಸ್ಥೆ ಆಗಬೇಕು. ಎಲ್ಲ ಸರ್ಕಾರಿ ಕಟ್ಟಡಗಳು, ಶಾಲಾ-ಕಾಲೇಜು ಕಟ್ಟಡಗಳು ಹಾಗೂ ಮನೆಗಳಲ್ಲಿ ಮಳೆ ನೀರು ಕೊಯ್ಲು ವ್ಯವಸ್ಥೆ ಆಗಬೇಕು ಎಂದು ಆಗ್ರಹಿಸಿದರು.

## ಟೆಂಪೋ ಟ್ರಾಕ್ಸ್ ಅಪಘಾತ : 21 ಮಂದಿಗೆ ಗಾಯ



ಹೊಳೆನರಸೀಪುರ : ಟೆಂಪೋ ಟ್ರಾಕ್ಸ್‌ವೊಂದು ರಸ್ತೆಬದಿಯ ರಕ್ಷಣಾ ಗೋಡೆಗೆ ಡಿಕ್ಕಿ ಹೊಡೆದು ಗದ್ದೆ ಹಳ್ಳಕ್ಕೆ ಉರುಳಿ ಬಿದ್ದ ಪರಿಣಾಮ ಅದರಲ್ಲಿದ್ದ 21 ಮಂದಿ ಪ್ರಯಾಣಿಕರು ಗಾಯಗೊಂಡಿರುವ ಘಟನೆ ತಾಲ್ಲೂಕಿನ ಆಲಗೋಡನಹಳ್ಳಿ ಬಳಿ ನಡೆದಿದೆ.

ತಾಲ್ಲೂಕಿನ ಆಲಗೌಡನಹಳ್ಳಿ ಸಮೀಪದ ಕೆರೆ ಏರಿಯ ತಿರುವು (ಹಾಸನ-ಮೈಸೂರು ರಾಜ್ಯ ಹೆದ್ದಾರಿ) ರಸ್ತೆಯಲ್ಲಿ ಮಂಗಳವಾರ ಬೆಳಿಗ್ಗೆ 6-30ರ ಸಮಯದಲ್ಲಿ ಈ ಅಪಘಾತ ಸಂಭವಿಸಿದ್ದು , ಕೆಲವರಿಗೆ ಗಂಭೀರ ಸ್ವರೂಪದ ಪೆಟ್ಟು ಬಿದ್ದಿದ್ದರೆ ಉಳಿದವರಿಗೆ ಸಣ್ಣ ಪುಟ್ಟ ಗಾಯಗಳಾಗಿವೆ. ಅದೃಷ್ಟವಷಾತ್ ಎಲ್ಲರೂ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಗಂಭೀರ ಪೆಟ್ಟು ಬಿದ್ದಿರುವ ಅಶ್ವಿನಿ, ಆನಂದ, ಶಾಂತ, ಜಯಕುಮಾರ್, ವರ್ಷಿತ, ಮಲ್ಲಿಕ್ ಹಾಗೂ ಚಂದನ್ ಅವರುಗಳಿಗೆ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ನೀಡಿ ಆಂಬುಲೆನ್ಸ್ ಮೂಲಕ ಮೈಸೂರಿನ ಕೆ.ಆರ್.ಆಸ್ಪತ್ರೆಗೆ ಕಳುಹಿಸಿಕೊಡಲಾಗಿದೆ. ಗಾಯಾಳುಗಳಲ್ಲಿ ಕೆಲವರು ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡರು. ಸ್ಥಳಕ್ಕೆ ಭೇಟಿ ನೀಡಿದ್ದ ಹಳ್ಳಿ ಮೈಸೂರು ಪೊಲೀಸ್ ಉಪ ಠಾಣೆಯ ಎ.ಎಸ್.ಐ. ಶೇಖರಪ್ಪ ಮತ್ತು ಸಿಬ್ಬಂದಿ ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗೆ ಕರೆತಂದು ಚಿಕಿತ್ಸೆ ಕೊಡಿಸಲು ನೆರವಾದರು.

ಟೆಂಪೋ ಚಾಲಕ ಪ್ರದೀಪ ಸೇರಿದಂತೆ ಎಲ್ಲರೂ ಒಂದೇ ಕುಟುಂಬದವರಾಗಿದ್ದು, ಮೈಸೂರು ನಗರದ ವಿವಿಧ ಬಡಾವಣೆಗಳ ನಿವಾಸಿಗಳಾಗಿದ್ದಾರೆ.

ಕಳೆದ ನಾಲ್ಕು ದಿನಗಳ ಕಾಲ ಶಾಲಾ-ಕಾಲೇಜು ಮತ್ತು ಸರ್ಕಾರಿ ಕಛೇರಿಗಳಿಗೆ ರಜೆ ಇದ್ದುದರಿಂದ ಸಂಬಂಧಿ ಪ್ರದೀಪನ ಟೆಂಪೋ ಟ್ರಾಕ್ಸ್‌ನಲ್ಲಿ ಕುಟುಂಬದವರೆಲ್ಲರೂ ದಕ್ಷಿಣ ಕನ್ನಡ ಜಿಲ್ಲೆಯ ಪುಣ್ಯ ಕ್ಷೇತ್ರಗಳಿಗೆ ಹೋಗಿ ವಾಪಸ್ ಹಾಸನ ಮೂಲಕ ಹೊಳೆನರಸೀಪುರ ಮಾರ್ಗವಾಗಿ ಮೈಸೂರಿಗೆ ತೆರಳುತ್ತಿದ್ದರು ಎಂದು ಗೊತ್ತಾಗಿದೆ.

## ಎತ್ತಿನಹಳ್ಳ ಯೋಜನೆ : ಹೆಚ್ಚುವರಿಯಾಗಿ 40 ಕೆರೆಗಳಿಗೆ ನೀರು ತುಂಬಿಸಲು ಪ್ರಸ್ತಾವನೆ

ಹಾಸನ : ಎತ್ತಿನಹಳ್ಳ ಯೋಜನೆಯಿಂದ ಬೇಲೂರು ತಾಲ್ಲೂಕಿನ ಹಳೇಬೀಡು , ಮಾದಿಹಳ್ಳಿ ಹಾಗೂ ಜಾವಗಲ್ ಹೋಬಳಿಗಳ 40 ಕೆರೆಗಳಿಗೆ ನೀರು ತುಂಬಿಸಲು ಪ್ರಸ್ತಾವನೆ ಸಿದ್ಧಪಡಿಸಿದ್ದು , ಶೀಘ್ರವೇ ಸರ್ಕಾರದ ಅನುಮೋದನೆ ದೊರೆಯಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ, ರೇಷ್ಮೆ ಮತ್ತು ಪಶು ಸಂಗೋಪನಾ ಸಚಿವ ಎ.ಮಂಜು ತಿಳಿಸಿದ್ದಾರೆ.

ಪ್ರವಾಸಿ ಮಂದಿರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಸಚಿವರು, ಮಾದೀಹಳ್ಳಿಯ 3, ಹಳೇಬೀಡಿನ 21 ಹಾಗೂ ಜಾವಗಲ್‌ನ 16 ಕೆರೆಗಳಿಗೆ ನೀರು ತುಂಬಿಸಲು ಉದ್ದೇಶಿಸಲಾಗಿದೆ ಎಂದು ವಿವರಿಸಿದರು.

ಈ ಸಂಬಂಧ ಇತ್ತೀಚೆಗೆ ನೀರಾವರಿ ಸಲಹಾ ಸಮಿತಿಯ ಅಧಿಕಾರಿಗಳ ಸಭೆ ನಡೆದಿದ್ದು , ಹೆಚ್ಚುವರಿಯಾಗಿ 40 ಕೆರೆಗಳಿಗೆ ನೀರು ತುಂಬಿಸುವ ಸಂಬಂಧ ತೀರ್ಮಾನ ಕೈಗೊಳ್ಳಲಾಗಿದೆ. ಈ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

ಮುಂದಿನ ತಿಂಗಳು 4ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಉನ್ನತ ನೀರಾವರಿ ಸಲಹಾ ಸಮಿತಿಯ ಅಧಿಕಾರಿಗಳ ಸಭೆ ನಡೆಯಲಿದ್ದು , ಅಂದು ಈ ಸಂಬಂಧ ತೀರ್ಮಾನವಾಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎ.ಮಂಜು ವಿವರಿಸಿದರು.



ಈಗಾಗಲೇ ಈ ನಿಟ್ಟಿನಲ್ಲಿ ಕ್ರಮ ವಹಿಸಿರುವ ಹಿನ್ನೆಲೆಯಲ್ಲಿ ಬೇಲೂರು ತಾಲ್ಲೂಕಿಗೆ ನೀರು ಪೂರೈಸುವಂತೆ ಒತ್ತಾಯಿಸಿ ಪುಷ್ಪಗಿರಿ ಮಠದ ಸ್ವಾಮೀಜಿಗಳು ನಡೆಸಲು ಉದ್ದೇಶಿಸಿರುವ ಸತ್ಯಾಗ್ರಹವನ್ನು ಕೈ ಬಿಡಬೇಕೆಂದು ಮನವಿ ಮಾಡಿದರು.

ಸ್ವಾಮೀಜಿಯವರ ಕೋರಿಕೆಗೆ ಈಗಾಗಲೇ ಪೂರಕ ಸ್ಪಂದನೆ ಸಿಕ್ಕಿದೆ. ಈ ಹಿಂದೆ ಎತ್ತಿನಹಳ್ಳದಿಂದ ರಾಜ್ಯದ 527 ಕೆರೆಗಳಿಗೆ ನೀರು ಪೂರೈಸಲು ಯೋಜನೆ ಸಿದ್ದಪಡಿಸಿದ್ದು, ಕಾಮಗಾರಿ ಅನುಷ್ಠಾನಗೊಳ್ಳುತ್ತಿದೆ. ಇದೀಗ ಹೆಚ್ಚುವರಿಯಾಗಿ ಮಾದಿಹಳ್ಳಿಯ 3, ಹಳೇಬೀಡಿನ 21 ಹಾಗೂ ಜಾವಗಲ್ ಹೋಬಳಿಯ 16 ಕೆರೆಗಳಿಗೆ ನೀರು ಪೂರೈಸಲು ಯೋಜನೆ ಸಿದ್ಧಪಡಿಸಿ ಸಲ್ಲಿಸಲಾಗಿದೆ. ಮುಂಬರುವ ಜನವರಿ ವೇಳೆಗೆ ಈ ಕೆರೆಗಳಿಗೆ ಪ್ರಾಯೋಗಿಕವಾಗಿ ನೀರು ಹರಿಸಲಾಗುವುದು. ಆದ್ದರಿಂದ ಸ್ವಾಮೀಜಿಗಳು ತಮ್ಮ ಉದ್ದೇಶಿತ ಸತ್ಯಾಗ್ರವನ್ನು ನಡೆಸಬಾರದೆಂದು ಕೋರಿದರು.

ಅ.12ರಿಂದ ನಡೆಯುವ ಹಾಸನಾಂಬ ದರ್ಶನ ಮಹೋತ್ಸವ ಈ ಹಿಂದಿನ ಸಂಪ್ರದಾಯಗಳಂತೆ ನಡೆಯಲಿದೆ ಎಂದು ಸಚಿವರು ತಿಳಿಸಿದರು. *(-4ನೇ ಪುಟಕ್ಕೆ)*

**“ ಆನೆ ಕಾರಿಡಾರ್‌ಗೆ ಸಂಬಂಧಿಸಿದಂತೆ ಮಲೆನಾಡು ಭಾಗದ ರೈತರು ಭೂಮಿ ಬಿಟ್ಟುಕೊಡಲು ನಿರ್ಧರಿಸಿದ್ದಾರೆ. ಈ ಬಗ್ಗೆ ಚರ್ಚೆ ಕೂಡ ನಡೆದಿದೆ. ಮತ್ತೆ ದೆಹಲಿಗೆ ತೆರಳಿ ಸಂಬಂಧಿಸಿದವರೊಂದಿಗೆ ಚರ್ಚೆ ನಡೆಸುತ್ತೇನೆ.**

**-ಎ.ಮಂಜು, ಜಿಲ್ಲಾ ಉಸ್ತುವಾರಿ ಸಚಿವ**

## ಮೇಲ್ಸೇತುವೆ : ಮುಂದಿನ ಸಂಪುಟ ಸಭೆಯಲ್ಲಿ ಅನುಮೋದನೆ

ನಗರದ ಎನ್.ಆರ್.ಸರ್ಕಲ್ ಸಮೀಪ ರೈಲ್ವೆ ಮೇಲ್ಸೇತುವೆ ನಿರ್ಮಾಣ ಇನ್ನು ವಿಳಂಬವಾಗುವುದಿಲ್ಲ ಎಂದು ಸ್ಪಷ್ಟಪಡಿಸಿರುವ ಜಿಲ್ಲಾ ಉಸ್ತುವಾರಿ ಸಚಿವ ಎ.ಮಂಜು, ಈ ಸಂಬಂಧ ಮುಂದಿನ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ದೊರೆಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಹಿಂದೆ ಅಂದಾಜು ಪಟ್ಟಿ ಸಿದ್ಧವಾಗಿತ್ತು. ಆದರೆ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಪರಿಶೀಲಿಸಿ ಮತ್ತೊಂದು ಅಂದಾಜು ಪಟ್ಟಿ ಸಿದ್ಧಪಡಿಸಿ ದ್ದಾರೆ. 48.40 ಕೋಟಿ ರೂ. ವೆಚ್ಚದಲ್ಲಿ ಯೋಜನೆ ತಯಾರಿಸಿದ್ದಾರೆ ಎಂದು ಹೇಳಿದರು. ಈ ತಿಂಗಳ ಅಂತ್ಯದೊಳಗೆ ಕ್ಯಾಬಿನೆಟ್ ಸಭೆಯಲ್ಲಿ ಅನುಮೋದನೆ ಪಡೆದು ರಾಜ್ಯ ಸರ್ಕಾರದ ಪಾಲನ್ನು ಭರಿಸಲಾಗುವುದು. ಯೋಜನೆ ಜಾರಿ ಬಗ್ಗೆ ಅನುಮಾನ ಬೇಡ ಎಂದು ಸಚಿವ ಎ.ಮಂಜು ಹೇಳಿದರು.

## 550 ಪಶು ವೈದ್ಯರ ನೇರ ನೇಮಕಾತಿ ಪೂರ್ಣ

ರಾಜ್ಯದಲ್ಲಿ ಖಾಲಿ ಇರುವ 550 ಪಶು ವೈದ್ಯರ ಹುದ್ದೆಗಳಿಗೆ ನೇರ ನೇಮಕಾತಿ ಪೂರ್ಣಗೊಂಡಿದೆ. ಈಗಾಗಲೇ ಕೆ.ಪಿ.ಎಸ್.ಸಿ. ಮೂಲಕ ಪ್ರಕ್ರಿಯೆ ನಡೆಸಿ ಅಂತಿಮ ಹಂತದ ಪಟ್ಟಿ ಪ್ರಕಟಿಸಿದ್ದು, ಆಕ್ಷೇಪಣೆಗಳನ್ನು ಆಹ್ವಾನಿಸಿದೆ ಶೇ.78.3ಕ್ಕೂ ಅಧಿಕ ಅಂಕ ಪಡೆದಿರುವ ಅಭ್ಯರ್ಥಿಗಳನ್ನು ಜೇಷ್ಠತೆ ಆಧಾರದ ಮೇಲೆ ಆಯ್ಕೆ ಮಾಡಲಾಗಿದೆ. ಇದಲ್ಲದೆ 371ಜೆ ಆಧಾರದ ಮೇಲೆ 114 ಪಶು ವೈದ್ಯರನ್ನು ಹೈದರಾಬಾದ್-ಕರ್ನಾಟಕ ಭಾಗಕ್ಕೆ ನೇರ ನೇಮಕಾತಿ ಮಾಡಲಾಗುವುದು ಎಂದು ಸಚಿವ ಮಂಜು ಮಾಹಿತಿ ನೀಡಿದರು.

ಈ ಪಶು ವೈದ್ಯರ ನೇಮಕಾತಿಯಿಂದ ಎಲ್ಲಾ ಪಶು ವೈದ್ಯಕೀಯ ಆಸ್ಪತ್ರೆಗಳಲ್ಲಿ ವೈದ್ಯರು ಲಭ್ಯವಿರುವ ದೇಶದ ಏಕೈಕ ರಾಜ್ಯ ಎಂಬ ಹೆಗ್ಗಳಿಕೆ ಕರ್ನಾಟಕಕ್ಕೆ ದೊರೆಯಲಿದೆ ಎಂದು ಅವರು ಹೇಳಿದರು.

## ತಹಸೀಲ್ದಾರ್, ವೃತ್ತ ನಿರೀಕ್ಷಕರ ಅಮಾನತ್ತಿಗೆ ಒತ್ತಾಯ

ಹಾಸನ : ದೇವಸ್ಥಾನ ಪ್ರವೇಶಕ್ಕೆ ಸಂಬಂಧಿಸಿದಂತೆ ಸವರ್ಣೀಯರು ದಲಿತರ ಮೇಲೆ ಹಲ್ಲೆ ಮಾಡದಂತೆ ರಕ್ಷಣೆ ಕೋರಿ ಮನವಿ ಸಲ್ಲಿಸಿದ್ದರೂ, ದಲಿತರ ಮೇಲಿನ ದೌರ್ಜನ್ಯವನ್ನು ತಡೆಯುವಲ್ಲಿ ವಿಫಲರಾಗಿರುವ ತಹಸೀಲ್ದಾರ್ ಮತ್ತು ವೃತ್ತ ನಿರೀಕ್ಷಕರನ್ನು ಕೂಡಲೇ ಅಮಾನತ್ತುಗೊಳಿಸಬೇಕು ಎಂದು ಒತ್ತಾಯಿಸಿ ದಲಿತಪರ ಸಂಘಟನೆಗಳು ಮಂಗಳವಾರ ಪ್ರತಿಭಟನೆ ನಡೆಸಿದವು

ಬೇಲೂರು ತಾಲ್ಲೂಕಿನ ಗಂಗೂರು ಗ್ರಾಮದಲ್ಲಿರುವ ಗಂಗನಾಥ ಸ್ವಾಮಿ ದೇವಸ್ಥಾನ ಪ್ರವೇಶಕ್ಕೆ ಸಂಬಂಧಿಸಿದಂತೆ ಪ್ರಕರಣ ದಾಖಲಾಗಿತ್ತು. ದಲಿತರಿಗೆ ಪ್ರವೇಶ ನಿರಾಕರಿಸಿದ್ದರಿಂದ ಮುಜರಾಯಿ ಇಲಾಖೆಗೆ ಸೇರಿದ್ದ ಈ ದೇವಸ್ಥಾನದಲ್ಲಿ ಯಾವುದೇ ಉತ್ಸವಗಳು ಮತ್ತು ಧಾರ್ಮಿಕ ಕಾರ್ಯಕ್ರಮಗಳು ನಡೆಯುವಂತಿಲ್ಲವೆಂದು ತೀರ್ಮಾನಿಸಲಾಗಿತ್ತು. ಮೂರು ವರ್ಷಗಳ ಕಾಲ ದೇವಸ್ಥಾನದ ಬಾಗಿಲು ಮುಚ್ಚಲ್ಪಟ್ಟಿತ್ತು. ಆದರೆ ಇದನ್ನು ಉಲ್ಲಂಘಿಸಿದ ಗ್ರಾಮದ ಸವರ್ಣೀಯರು, ತಹಸೀಲ್ದಾರರ ಅನುಮತಿ ಪಡೆಯದೆ ದಸರಾ ಮೆರವಣಿಗೆಯ ನೆಪದಲ್ಲಿ ಉದ್ದೇಶಪೂರ್ವಕವಾಗಿಯೇ ದಲಿತರ ಕೇರಿಗಳಿಗೆ ನುಗ್ಗಿ ಜಾತಿ ನಿಂದನೆ ಮಾಡುತ್ತಾ ಕೆಲವು ಯುವಕರ ಮೇಲೆ ಹಲ್ಲೆ ಮಾಡಿದ್ದಾರೆ. ಈ ಬಗ್ಗೆ ದೂರು ದಾಖಲಾಗಿದ್ದರೂ ಏನೂ ಪ್ರಯೋಜನವಾಗಿಲ್ಲ ಎಂದು ದೂರಿದರು.



### ಪೊಲೀಸರೊಂದಿಗೆ ಮಾತಿನ ಚಕಮಕಿ

ಬೇಲೂರು ತಾಲ್ಲೂಕು ಹಳೇಬೀಡು ಹೋಬಳಿ ಗಂಗೂರು ಗ್ರಾಮದಲ್ಲಿ ದಲಿತರ ಮೇಲೆ ನಡೆದಿರುವ ಹಲ್ಲೆ , ದೌರ್ಜನ್ಯ ಹಾಗೂ ಅನುಮತಿ ಇಲ್ಲದೆ ದೇವರ ಉತ್ಸವ ಮಾಡಿದವರ ಮೇಲೆ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಮಂಗಳವಾರ ಜಿಲ್ಲಾಧಿಕಾರಿಗಳ ಕಛೇರಿ ಆವರಣದಲ್ಲಿ ಪ್ರತಿಭಟನೆ ನಡೆಸಲು ಬಂದ ದಲಿತಪರ ಸಂಘಟನೆಗಳ ಮುಖಂಡರು ಹಾಗೂ ಪೊಲೀಸರ ನಡುವೆ ವಾಗ್ವಾದ ನಡೆಯಿತು.

ಹೇಮಾವತಿ ಪ್ರತಿಮೆ ಬಳಿಯಿಂದ ಹೊರಟ ಪ್ರತಿಭಟನಾಕಾರರು, ಜಿಲ್ಲಾಧಿಕಾರಿಗಳ ಕಛೇರಿ ಮುಂಭಾಗ ರಸ್ತೆಯಲ್ಲಿ ಪ್ರತಿಭಟನೆ ನಡೆಸಿದರು. ದಲಿತರಿಗೆ ರಕ್ಷಣೆ ನೀಡದ ಬೇಲೂರು ತಹಸೀಲ್ದಾರ್ ಮತ್ತು ಹಳೇಬೀಡು ಸಬ್ ಇನ್ಸ್‌ಪೆಕ್ಟರ್ ಅಮಾನತ್ತಿಗೆ ಒತ್ತಾಯಿಸಿದರು.

ಮೆರವಣಿಗೆ ಸಂದರ್ಭದಲ್ಲಿ ದೌರ್ಜನ್ಯ ನಡೆಯುವ ಸಂಭವವಿದ್ದು , ದಲಿತರಿಗೆ ರಕ್ಷಣೆ ಕೊಡಬೇಕೆಂದು ದಲಿತರು ತಹಸೀಲ್ದಾರ್ ಮತ್ತು ಹಳೇಬೀಡು ಠಾಣೆಯ ವೃತ್ತ ನಿರೀಕ್ಷಕರಿಗೆ ಮನವಿ ಮಾಡಿದ್ದರೂ ಅವರು ನಿರ್ಲಕ್ಷಿಸಿದ್ದರಿಂದ ದಲಿತರ ಮೇಲೆ ಸವರ್ಣೀಯರು ಹಲ್ಲೆ ಮಾಡಿದ್ದಾರೆ. ಇದಕ್ಕೆ ತಾಲ್ಲೂಕು ಆಡಳಿತ ಮತ್ತು ವೃತ್ತ ನಿರೀಕ್ಷಕರೇ ಹೊಣೆಯಾಗಿದ್ದು, ಕೂಡಲೇ ಇವರನ್ನು ಅಮಾನತ್ತುಪಡಿಸಬೇಕು ಹಾಗೂ ತಾಲ್ಲೂಕು ಆಡಳಿತದ ಅನುಮತಿ ಪಡೆಯದೆ ರಂಗನಾಥ ಸ್ವಾಮಿ ದೇವರ ಉತ್ಸವ ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಸಮತಾ ಸೈನಿಕ ದಳದ ಸತೀಶ್, ದಲಿತ ಮಾನವ ಹಕ್ಕುಗಳ ವೇದಿಕೆಯ ಮರಿಜೋಸೆಫ್, ಕೆ.ವೈ.ಡಿ.ಎಸ್.ಎಸ್.ನ ಕ್ರಾಂತಿ, ಚೌಡುವಳ್ಳಿ ಜಗದೀಶ್, ದಂಡೋರ ಕುಮಾರಸ್ವಾಮಿ, ಗಂಗೂರು ಮಲ್ಲೇಶ್ ಇನ್ನಿತರರು ಭಾಗವಹಿಸಿದ್ದರು.

## ಚನ್ನಪಟ್ಟಣ ಕೆರೆ ತುಂಬಿಸದಿದ್ದರೆ ಹಾಸನ್ ಬಂದ್ ಎಚ್ಚರಿಕೆ




ಹಾಸನ : ನಗರದ ಹೃದಯ ಭಾಗದಲ್ಲಿರುವ ಚನ್ನಪಟ್ಟಣ ಕೆರೆಗೆ 30 ದಿನಗಳಲ್ಲಿ ನೀರು ತುಂಬಿಸದಿದ್ದರೆ ನಾವೇ ನಗರ ಬಂದ್ ಮಾಡಿ ಜೆಸಿಬಿಯಿಂದ ಕಾಲುವೆ ಮುಚ್ಚಿ ಕೆರೆಗೆ ನೀರು ತುಂಬಿಸುವ ಕಾಮಗಾರಿ ಕೈಗೊಳ್ಳುತ್ತೇವೆ ಎಂದು ಹಿರಿಯ ನಾಗರಿಕರ ವೇದಿಕೆಯ ಸದಸ್ಯ ಹಾಗೂ ಹುಡಾ ಮಾಜಿ ಅಧ್ಯಕ್ಷ ಬಿ.ಕೆ.ಮಂಜುನಾಥ್ ಎಚ್ಚರಿಸಿದರು.

ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 159 ಎಕರೆ ವಿಸ್ತೀರ್ಣವುಳ್ಳ ಚನ್ನಪಟ್ಟಣ ಕೆರೆಯನ್ನು ಅಭಿವೃದ್ಧಿ ನೆಪದಲ್ಲಿ ಮುಚ್ಚಿ ಹಾಕಿರುವ ಪರಿಣಾಮ ಲಕ್ಷಾಂತರ ಜನ ಜಾನುವಾರುಗಳು ನೀರಿಲ್ಲದೆ ಪರಿತಪಿಸುವಂತಹ ಪರಿಸ್ಥಿತಿ ಸೃಷ್ಟಿಯಾಗಿದೆ ಎಂದು ದೂರಿದರು.

ಚನ್ನಪಟ್ಟಣ ಗ್ರಾಮ ಹಾಗೂ ಹೊಸ ಬಸ್ ನಿಲ್ದಾಣದ ಮಧ್ಯದಲ್ಲಿ ನೀರು ಶೇಖರಿಸಿ ನಿಲ್ಲಿಸಲು ಸರ್ಕಾರದಿಂದ ಯೋಜನೆ ರೂಪಿಸಿ, ಕಾಮಗಾರಿ ಪ್ರಾರಂಭ ಮಾಡಿ ದಶಕ ಕಳೆದರೂ ಕಾಮಗಾರಿ ಪೂರ್ಣಗೊಳ್ಳದೇ ಇಂದಿಗೂ ನೀರು ನಿಲ್ಲಿಸಲಾಗಿಲ್ಲ ಎಂದು ಆರೋಪಿಸಿದರು.

ಈ ಸಂಬಂಧ ಜಿಲ್ಲಾಧಿಕಾರಿ ಕಛೇರಿಗೆ ಆರ್.ಟಿ.ಐ. ಮುಖಾಂತರ ಯೋಜನೆಯ ನೀಲಿ ನಕಾಶೆ ಮತ್ತು ಕಾಮಗಾರಿಗೆ ಸರ್ಕಾರದಿಂದ ಬಿಡುಗಡೆಯಾದ ಹಣದ ವಿವರ ಹಾಗೂ ಇದುವರೆಗೆ ಖರ್ಚಾಗಿರುವ ವಿವರ ಕೇಳಲಾಗಿತ್ತು. ಇಲ್ಲಿಯವರೆಗೆ ಈ ಬಗ್ಗೆ ಯಾವುದೇ ಮಾಹಿತಿ ಜಿಲ್ಲಾಧಿಕಾರಿ ಕಛೇರಿಯಿಂದ ಲಭ್ಯವಾಗಿಲ್ಲ ಎಂದರು.

ಸರ್ಕಾರದ ಹಣ ವ್ಯಯವಾಗಿರುವ ಬಗೆಗಿನ ಮಾಹಿತಿಗೆ ಇಷ್ಟೊಂದು ಹೋರಾಟದ ಅಗತ್ಯವಿದೆಯೇ? ಸುಮಾರು 6 ರಿಂದ 7 ಕೋಟಿ ರೂ. ಹಣ ವ್ಯಯವಾಗಿರುವ ಬಗ್ಗೆ ಮಾಹಿತಿ ಇದ್ದು, ಈ ಕುರಿತು ಸಮರ್ಪಕ ಮಾಹಿತಿ ನೀಡದಿದ್ದಲ್ಲಿ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ಮಾಹಿತಿ ಏಕೆ ಕೊಡುತ್ತಿಲ್ಲ? ಇದೇನು ಅವರ ಆಸ್ತಿಯೇ? ರಾಜಕಾರಣಿಗಳು ದುರಹಂಕಾರದಿಂದ ವರ್ತಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಹಾಸನ ಸುತ್ತಮುತ್ತಲಿನ ಹದಿನೆಂಟು ಕೆರೆಗಳಿಗೆ ನೀರು ತುಂಬಿಸಿದರೆ ಕುಡಿಯುವ ನೀರಿಗೆ ತೊಂದರೆ ಉದ್ಭವಿಸದು. ಕುಡಿಯುವ ನೀರಿಗೆ ರಾಜಕೀಯ ಬೇಡ. ಮೂವತ್ತು ದಿನದೊಳಗಾಗಿ ನೀರು ತುಂಬಿಸುವ ಕೆಲಸ ಪ್ರಾರಂಭಿಸದಿದ್ದರೆ ಜನರ ಬಳಿ ದೇಣಿಗೆ ಸಂಗ್ರಹಿಸಿ, ಜೆಸಿಬಿಯಿಂದ ಕಾಲುವೆ ಮುಚ್ಚಿಸಿ ನೀರು ತುಂಬಿಸುವ ಕೆಲಸವನ್ನು ನಾವೇ ಮಾಡುತ್ತೇವೆ ಎಂದರು.

ಸೆ.4ರಂದು ಬೇಲೂರಿನಲ್ಲಿ ಅನೇಕ ಮಠಾಧೀಶರು ಹಾಗೂ ಸಂಘ ಸಂಸ್ಥೆಗಳ ನೇತೃತ್ವದಲ್ಲಿ ನಡೆಯುತ್ತಿರುವ ಕೆರೆಗಳಿಗೆ ನೀರು ತುಂಬಿಸುವ ಹೋರಾಟಕ್ಕೆ ಹಿರಿಯ ನಾಗರಿಕ ವೇದಿಕೆ ಬೆಂಬಲ ಸೂಚಿಸಲಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಮಾಜಿ ಶಾಸಕ ಬಿ.ವಿ.ಕರೀಗೌಡ, ಸ್ವಾತಂತ್ರ್ಯ ಹೋರಾಟಗಾರ ಹೆಚ್.ಎಂ.ಶಿವಣ್ಣ , ಜಯಲಕ್ಷ್ಮೀ ರಾಜಣ್ಣಗೌಡ, ವೈ.ಎಸ್.ವೀರಭದ್ರಪ್ಪ , ಪುಟ್ಟಸ್ವಾಮಿ ಹಾಗೂ ಇತರರು ಹಾಜರಿದ್ದರು.